ಕರ್ನಾಟಕ ಸರ್ಕಾರ

ಸಂಖ್ಯೆ/ಪಪೂಶಿಇ/ಜಂನಿ(ಪ)/ಪರೀಕ್ಷೆ/2016-17

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ
18ನೇ ಅಡ್ಡರಸ್ತೆ, ಮಲ್ಲೇಶ್ವರಂ
ಬೆಂಗಳೂರು – 560 012.
ದಿನಾಂಕ 19-05-2016.

ಜಿಲ್ಲಾ ಉಪ ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ
---------------- ಜಿಲ್ಲೆ.

ಮಾನ್ಯರೆ,

ವಿಷಯಃ 2016ರ ಮಾರ್ಚ್ ದ್ವಿತೀಯ ಪಿಯುಸಿ ಪರೀಕ್ಷೆಯ ಉತ್ತರ ಪತ್ರಿಕೆಯ Scanned ಪ್ರತಿ ಒದಗಿಸುವ,ಮರು ಎಣಿಕೆ ಮತ್ತು ಮರು ಮೌಲ್ಯಮಾಪನ ವ್ಯವಸ್ಥೆಯ ಬಗ್ಗೆ ವ್ಯಾಪಕ ಪ್ರಚಾರ ನೀಡುವ ಕುರಿತು.

*****

ಮಾರ್ಚ್-2016ರ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಪ್ರಕಟವಾದ ನಂತರ ಪ್ರಸಕ್ತ ಸಾಲಿನಿಂದ ಮೌಲ್ಯಮಾಪನ ಮಾಡಿದ ಉತ್ತರ ಪತ್ರಿಕೆಗಳ Scan ಮಾಡಿದ ಪ್ರತಿಗಳನ್ನು ಒದಗಿಸಲಾಗುತ್ತಿದೆ. ಪ್ರಸಕ್ತ ವರ್ಷದಿಂದ ಫೋಟೋ ಪ್ರತಿಗಳನ್ನು ಒದಗಿಸುವ ವ್ಯವಸ್ಥೆಯನ್ನು ನಿಲ್ಲಿಸಲಾಗಿದೆ. Scan ಮಾಡಿದ ಉತ್ತರ ಪತ್ರಿಕೆಗಳನ್ನು ಒದಗಿಸಿದ ನಂತರ ಉತ್ತರ ಪತ್ರಿಕೆಗಳ ಮರು ಎಣಿಕೆ ಮತ್ತು ಮರು ಮೌಲ್ಯಮಾಪನಕ್ಕಾಗಿ ಅವಕಾಶ ಮಾಡಿಕೊಡಲಾಗುತ್ತಿದೆ. ಶುಲ್ಕ ಪಾವತಿಸುವ ವ್ಯವಸ್ಥೆಯನ್ನು ನಿರ್ದಿಷ್ಟಪಡಿಸಿದ ಕೆಲವು ಬ್ಯಾಂಕ್‌ಗಳ ಮೂಲಕ ನಿರ್ವಹಿಸಲಾಗುತ್ತಿದೆ.

ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಲು ಪದವಿ ಪೂರ್ವ ಶಿಕ್ಷಣ ಇಲಾಖೆಯ ವಿಸ್ತೃತವಾದ ಅಧಿಸೂಚನೆ ಹಾಗೂ ಸುತ್ತೋಲೆಯ ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಮಾಡಿರುವ ಈ ನೂತನ ವ್ಯವಸ್ಥೆ ಕುರಿತು ಇಲಾಖೆಯ ಜಿಲ್ಲಾ ಉಪ ನಿರ್ದೇಶಕರ/ ಪ್ರಾಂಶುಪಾಲರ/ ಉಪನ್ಯಾಸಕರ ಸಹಕಾರವು ಬಹುಮುಖ್ಯವಾಗಿರುತ್ತದೆ. ಈ ವ್ಯವಸ್ಥೆ ಪೋಷಕರ ಹಾಗೂ ವಿದ್ಯಾರ್ಥಿಗಳಲ್ಲಿ ಯಾವುದೇ ಗೊಂದಲ ಉಂಟಾಗದಂತೆ ವ್ಯಾಪಕ ಪ್ರಚಾರವನ್ನು ನೀಡುವ ಕಾರ್ಯವನ್ನು ಇಲಾಖೆಯು ನಿಮ್ಮಿಂದ ಅಪೇಕ್ಷಿಸುತ್ತದೆ.

ಜಿಲ್ಲಾ ಉಪ ನಿರ್ದೇಶಕರು ಇತರೆ ಎಲ್ಲಾ ಕಾರ್ಯಗಳಿಗಿಂತಲೂ ಆದ್ಯತೆ ನೀಡಲು ಹಾಗೂ ಈ ವ್ಯವಸ್ಥೆಯನ್ನು ಸಮರ್ಪಕವಾಗಿ ಜಾರಿ ಮಾಡುವ ನಿಟ್ಟಿನಲ್ಲಿ ಸ್ಥಳೀಯವಾಗಿ ಎಲ್ಲಾ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡಲು ಸೂಚಿಸಿದೆ.

ಜಿಲ್ಲಾ ಉಪ ನಿರ್ದೇಶಕರು ಮತ್ತು ಪ್ರಾಂಶುಪಾಲರು ತಮ್ಮ ಜಿಲ್ಲಾ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ನಿರ್ದಿಷ್ಟಪಡಿಸಿದ ಬ್ಯಾಂಕ್‌ಗಳ ವಿವರವನ್ನು ಸೂಚನಾ ಫಲಕ ಮತ್ತು ಮಾಧ್ಯಮಗಳಲ್ಲಿ ಪ್ರಚಾರ ನೀಡಲು ಸೂಚಿಸಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.